**Akashvani : Bangalore**
**National Bulletin In Kannada**
**16.03.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.03.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

**೧. ತಮಿಳುನಾಡಿನಲ್ಲಿ ಎರಡು ಪ್ರಮುಖ ವಿದ್ಯುನ್ಮಾನ ಉತ್ಪಾದನಾ ಕ್ಲಸ್ಟರ್‌ಗಳ ಅಭಿವೃದ್ಧಿ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಘೋಷಣೆ**

**೨. ೨೦೨೮ ರ ವೇಳೆಗೆ ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ - ಮಾರ್ಗನ್ ಸ್ಟ್ಯಾನ್ಲಿ ವರದಿ**

**೩. ನವದೆಹಲಿಯಲ್ಲಿಂದು 'ಫಿಟ್ ಇಂಡಿಯಾ ಕಾರ್ನಿವಲ್' ಉದ್ಘಾಟಿಸಲಿರುವ ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ**

**೪. ಎರಡನೇ ಬಾರಿ ಮಹಿಳಾ ಪ್ರೀಮಿಯರ್ ಲೀಗ್ ಪ್ರಶಸ್ತಿ ಮುಡಿಗೇರಿಸಿಕೊಂಡ ಮುಂಬೈ ಇಂಡಿಯನ್ಸ್**

**<><*<><>*><>**

ತಮಿಳುನಾಡಿನಲ್ಲಿ ಎರಡು ಪ್ರಮುಖ ವಿದ್ಯುನ್ಮಾನ ಉತ್ಪಾದನಾ ಕ್ಲಸ್ಟರ್‌ಗಳನ್ನು ಅಭಿವೃದ್ಧಿಪಡಿಸುವುದಾಗಿ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದ್ದಾರೆ. ೧ ಸಾವಿರದ ೧೧೨ ಕೋಟಿ ರೂಪಾಯಿಗಳ ಹೂಡಿಕೆಯೊಂದಿಗೆ ಈ ಕ್ಲಸ್ಟರ್‌ಗಳನ್ನು ಪಿಳ್ಳೈಪಕ್ಕಂ ಮತ್ತು ಮನಲ್ಲೂರಿನಲ್ಲಿ ಸ್ಥಾಪಿಸಲಾಗುವುದು. ಜಾಗತಿಕ ವಿದ್ಯುನ್ಮಾನ ವ್ಯವಸ್ಥೆ ವಿನ್ಯಾಸ ಮತ್ತು ಉತ್ಪಾದನಾ ವಲಯದಲ್ಲಿ ಭಾರತದ ಸ್ಥಾನವನ್ನು ಬಲಪಡಿಸುವ ಗುರಿಯನ್ನು ಈ ಉಪಕ್ರಮ ಹೊಂದಿದೆ. ಚೆನ್ನೈನಲ್ಲಿ ನಿನ್ನೆ ನಡೆದ ಝುಟ್‌ವರ್ಕ್ ಎಲೆಕ್ಟ್ರಾನಿಕ್ಸ್‌ನ ನೂತನ ಉತ್ಪಾದನಾ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಸಚಿವರು ಈ ಘೋಷಣೆ ಮಾಡಿದ್ದಾರೆ. ಇದೇ ವೇಳೆ ಅವರು, ೧೫ ಎಕರೆ ಪ್ರದೇಶದಲ್ಲಿ ನಿರ್ಮಾಣಗೊಂಡಿರುವ ಈ ಸೌಲಭ್ಯ, ತಮಿಳುನಾಡಿನ ವಿದ್ಯುನ್ಮಾನ ಉತ್ಪಾದನಾ ಉದ್ಯಮವನ್ನು ಉತ್ತೇಜಿಸುವಲ್ಲಿ ಮತ್ತು ೫೦೦ ಶತಕೋಟಿ ಮೌಲ್ಯದ ಜಾಗತಿಕ ವಿದ್ಯುನ್ಮಾನ ವ್ಯವಸ್ಥೆ ವಿನ್ಯಾಸ ಮತ್ತು ಉತ್ಪಾದನಾ ವಲಯ ಮಾರುಕಟ್ಟೆ ಸ್ಥಾಪನೆಯಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ಹೇಳಿದರು.

**<><*<><>*><>**

೨೦೨೮ ರ ವೇಳೆಗೆ ಭಾರತ, ಜರ್ಮನಿಯನ್ನು ಹಿಂದಿಕ್ಕಿ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಜಾಗತಿಕ ಹಣಕಾಸು ಸೇವಾ ಸಂಸ್ಥೆ ಮಾರ್ಗನ್ ಸ್ಟ್ಯಾನ್ಲಿ ವರದಿ ತಿಳಿಸಿದೆ. ೨೦೨೩ರಲ್ಲಿ ೩.೫ ಟ್ರಿಲಿಯನ್ ಡಾಲರ್ ಮೌಲ್ಯದ ಆರ್ಥಿಕತೆಯಾಗಿದ್ದ ಭಾರತ, ೨೦೨೬ ರ ವೇಳೆಗೆ ೪.೭ ಟ್ರಿಲಿಯನ್ ಡಾಲರ್‌ಗೆ ವಿಸ್ತಾರಗೊಳ್ಳುವ ನಿರೀಕ್ಷೆಯಿದೆ ಎಂದು ವರದಿ ತಿಳಿಸಿದೆ. ೨೦೨೮ ರಲ್ಲಿ, ಭಾರತದ ಆರ್ಥಿಕತೆಯು ೫.೭ ಟ್ರಿಲಿಯನ್‌ಗೆ ಬೆಳೆಯುವ ಮೂಲಕ ಜರ್ಮನಿಯನ್ನು ಹಿಂದಿಕ್ಕಲಿದೆ. ಭಾರತ ವಿಶ್ವದ ಅತ್ಯಂತ ಬೇಡಿಕೆಯ ಗ್ರಾಹಕ ಮಾರುಕಟ್ಟೆಯಾಗಿ ಹೊರಹೊಮ್ಮಿದೆ. ಜಾಗತಿಕ ಉತ್ಪಾದನೆಯಲ್ಲಿ ಗಮನಾರ್ಹ ಪಾಲನ್ನು ಪಡೆದುಕೊಂಡಿದ್ದು, ಸ್ಥಿರ ಆರ್ಥಿಕ ನೀತಿಗಳು ಮತ್ತು ಸುಧಾರಿತ ಮೂಲಸೌಕರ್ಯ ಹೊಂದಿದೆ ಎಂದು ವರದಿ ತಿಳಿಸಿದೆ.

<><*<><>*><>

ನವದೆಹಲಿಯ ಜೆಎಲ್‌ಎನ್ ಕ್ರೀಡಾಂಗಣದಲ್ಲಿ ಇಂದು 'ಫಿಟ್ ಇಂಡಿಯಾ ಕಾರ್ನಿವಲ್' ಅನ್ನು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಈ ಫಿಟ್‌ನೆಸ್ ಮತ್ತು ವೆಲ್‌ನೆಸ್ ಉತ್ಸವ, ಆರೋಗ್ಯಕರ ಮತ್ತು ಸಕ್ರಿಯ ಜೀವನಶೈಲಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಇದು ಫಿಟ್ ಇಂಡಿಯಾ ಆಂದೋಲನದ ಆರೋಗ್ಯಕರ ಮತ್ತು ಬೊಜ್ಜು ಮುಕ್ತ ರಾಷ್ಟ್ರದ ದೃಷ್ಟಿಕೋನದೊಂದಿಗೆ ಹೊಂದಿಕೆಯಾಗುತ್ತದೆ. ಇದು ಹಗ್ಗದ ಸ್ಕಿಪ್ಪಿಂಗ್, ಸ್ಟೇಷನರಿ ಸೈಕ್ಲಿಂಗ್, ಆರ್ಮ್ ವ್ರೆಸ್ಲಿಂಗ್, ಕ್ರಿಕೆಟ್ ಬೌಲಿಂಗ್ ಸೇರಿದಂತೆ ಹಲವಾರು ಕ್ರೀಡಾ ಚಟುವಟಿಕೆಗಳನ್ನು ಒಳಗೊಂಡಿರಲಿದೆ. ಉದ್ಘಾಟನಾ ಸಮಾರಂಭದಲ್ಲಿ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ಖಡ್ಸೆ ಮತ್ತು ಬಾಲಿವುಡ್ ನಟ ಆಯುಷ್ಮಾನ್ ಖುರಾನಾ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ, ಮುಂಬರುವ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದ ಲೋಗೋ ಮತ್ತು ಗೀತೆಯನ್ನು ಸಹ ಅನಾವರಣಗೊಳಿಸಲಾಗುವುದು. ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟ ಈ ತಿಂಗಳ ೨೦ ರಂದು ರಾಷ್ಟ್ರ ರಾಜಧಾನಿಯಲ್ಲಿ ಪ್ರಾರಂಭವಾಗಲಿದೆ.

<><*<><>*><>

ಇಂದು ಪ್ರಸಾರವಾಗಲಿರುವ ವಿಜ್ಞಾನಿ ಹಾಗೂ ಸಂದರ್ಶಕ ಲೆಕ್ಸ್ ಫ್ರಿಡ್‌ಮನ್ ಅವರೊಂದಿಗಿನ ತಮ್ಮ ಸಂದರ್ಶನವನ್ನು ವೀಕ್ಷಿಸಲು ಪ್ರಧಾನಿ ನರೇಂದ್ರ ಮೋದಿ ಜನರನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಲೆಕ್ಸ್ ಫ್ರಿಡ್‌ಮನ್ ಪಾಡ್‌ಕ್ಯಾಸ್ಟ್ ಅನ್ನು ಆಯೋಜಿಸುವ ಫ್ರಿಡ್‌ಮನ್ ಅವರೊಂದಿಗೆ ವಿಶೇಷ ಸಂಭಾಷಣೆ ನಡೆಸಿರುವುದಾಗಿ ತಿಳಿಸಿದ್ದಾರೆ. ಈ ಸಂದರ್ಶನ ಪ್ರಧಾನಿ ನರೇಂದ್ರ ಮೋದಿಯವರ ಬಾಲ್ಯ, ಹಿಮಾಲಯದಲ್ಲಿನ ಸಮಯ ಮತ್ತು ಸಾರ್ವಜನಿಕ ಜೀವನದ ಪ್ರಯಣ ಸೇರಿದಂತೆ ಹಲವು ವೈವಿಧ್ಯಮಯ ವಿಷಯಗಳನ್ನು ಒಳಗೊಂಡಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೩೦ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ಆಲೋಚನೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮಕ್ಕಾಗಿಸಾರ್ವಜನಿಕರಿಂದ ಅನಿಸಿಕೆ, ಅಭಿಪ್ರಾಯಗಳನ್ನು ಆಹ್ವಾನಿಸಲಾಗಿದ್ದು, ಆಸಕ್ತರು ಟೋಲ್ ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ತಮ್ಮ ವಿಚಾರ ಹಂಚಿಕೊಳ್ಳಬಹುದು. ಇದರ ಜತೆಗೆ ನಮೋ ಆಪ್ ಮತ್ತು My Gov.in ಜಾಲತಾಣದ ಮೂಲಕ ಇದೇ ೨೮ರೊಳಗಾಗಿ ತಮ್ಮ ಅನಿಸಿಕೆ-ಅಭಿಪ್ರಾಯ ಹಂಚಿಕೊಳ್ಳಬಹುದಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕಭಾಷೆಗಳಲ್ಲಿ ಪ್ರಧಾನಿ ಭಾಷಣ ಬಿತ್ತರವಾಗಲಿದೆ.

<><*<><>*><>

ಲಕ್ನೋ, ಗುರುಗ್ರಾಮ್ ಮತ್ತು ದೆಹಲಿಯಲ್ಲಿ ಆನ್‌ಲೈನ್ ಮಾರುಕಟ್ಟೆ ಜಾಲಗಳಾದ ಅಮೆಜಾನ್ ಮತ್ತು ಫ್ಲಿಪ್‌ಕಾರ್ಟ್ ಸೇರಿದಂತೆ ಪ್ರಮುಖ ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳ ಬಹು ಗೋದಾಮು ಸ್ಥಳಗಳಲ್ಲಿ ಭಾರತೀಯ ಮಾನದಂಡಗಳ ಬ್ಯೂರೋ-ಃIS ಶೋಧ ಮತ್ತು ವಸ್ತುಗಳನ್ನು ವಶಪಡಿಸಿಕೊಳ್ಳುವ ಕಾರ್ಯಾಚರಣೆಗಳನ್ನು ನಡೆಸಿದೆ. ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಅಸುರಕ್ಷಿತ ಮತ್ತು ಪ್ರಮಾಣೀಕರಿಸದ ಉತ್ಪನ್ನಗಳ

ವಿತರಣೆಯನ್ನು ತಡೆಯುವ ಗುರಿಯನ್ನು ಈ ಕ್ರಮಗಳು ಹೊಂದಿವೆ. ಕಾರ್ಯಾಚರಣೆಯ ವೇಳೆ ಪ್ರಮುಖ ಇ-ಕಾಮರ್ಸ್ ವೇದಿಕೆಗಳಲ್ಲಿ ಹಲವಾರು ಪ್ರಮಾಣೀಕರಿಸದ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಬಿಐಎಸ್ ಗುರುತಿಸಿದ್ದು, ಈ ಎಲ್ಲಾ ಉತ್ಪನ್ನಗಳಿಗೆ ಬಿಐಎಸ್ ಪ್ರಮಾಣೀಕರಣವನ್ನು ಕಡ್ಡಾಯಗೊಳಿಸಲಾಗಿದೆ. ಗ್ರಾಹಕರು ಬಿಐಎಸ್ ಚಿಹ್ನೆಯನ್ನು ಹೊಂದಿರದ ಉತ್ಪನ್ನಗಳ ಬಗ್ಗೆ ದೂರುಗಳನ್ನು ಸಲ್ಲಿಸಲು ಅಥವಾ ಬಿಐಎಸ್ - ಪ್ರಮಾಣೀಕೃತ ಉತ್ಪನ್ನಗಳ ಬಗ್ಗೆ ಗುಣಮಟ್ಟದ ಕಾಳಜಿಯನ್ನು ವರದಿ ಮಾಡಲು ಬಿಐಎಸ್ ಕೇರ್ ಅಪ್ಲಿಕೇಶನ್ ಅನ್ನು ಬಳಸಬಹುದು. ಇ-ಕಾಮರ್ಸ್ ವೇದಿಕೆಗಳು ಸೇರಿದಂತೆ ಮಾರುಕಟ್ಟೆಯಲ್ಲಿ ಲಭ್ಯವಿರುವ ಗ್ರಾಹಕ ಉತ್ಪನ್ನಗಳು ಅನ್ವಯವಾಗುವ ಸುರಕ್ಷತೆ ಮತ್ತು ಗುಣಮಟ್ಟದ ಮಾನದಂಡಗಳನ್ನು ಅನುಸರಿಸುತ್ತವೆ ಎಂದು ಖಚಿತಪಡಿಸಿಕೊಳ್ಳಲು ಬಿಐಎಸ್ ಸಕ್ರಿಯವಾಗಿ ಮಾರುಕಟ್ಟೆ ಕಣ್ಗಾವಲು ನಡೆಸುತ್ತಿದೆ.

<><*<><>*><>

ಭಾರತದ ಹಾಕಿ ತಂಡದ ನಾಯಕ ಹರ್ಮನ್‌ಪ್ರೀತ್ ಸಿಂಗ್ ಮತ್ತು ಹಿರಿಯ ಗೋಲ್‌ಕೀಪರ್ ಸವಿತಾ ಪುನಿಯಾ ಇಂದು ಹಾಕಿ ಇಂಡಿಯಾ ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ಹಾಕಿ ಇಂಡಿಯಾ ಬಲ್ಬೀರ್ ಸಿಂಗ್ ವರ್ಷದ ಹಿರಿಯ ಆಟಗಾರ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಪುರುಷರ ವಿಭಾಗದ ಹಾಕಿ ಪಂದ್ಯಾವಳಿಗಳಲ್ಲಿ ನಾಯಕರಾಗಿ ಹರ್ಮನ್‌ಪ್ರೀತ್, ಭಾರತ ೨೦೨೪ ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಸತತ ಎರಡು ಕಂಚಿನ ಪದಕ ತನ್ನದಾಗಿಸಿಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇದರ ಜೊತೆಗೆ ಅವರು ಟೋಕಿಯೋ ಕ್ರೀಡಾಕೂಟದ ಕಂಚಿನ ಪದಕ ವಿಜೇತ ತಂಡದ ಭಾಗವಾಗಿದ್ದರು. ಮಹಿಳಾ ಹಾಕಿ ವಿಭಾಗದಲ್ಲಿ ಸವಿತಾ ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆಲ್ಲುವ ಸನಿಹದಲ್ಲಿದ್ದ ಭಾರತೀಯ ತಂಡದ ಸದಸ್ಯರಾಗಿದ್ದರು. ಸವಿತಾ ಮೂರನೇ ಬಾರಿ ಹಾಕಿ ಇಂಡಿಯಾ ಬಲ್ಜಿತ್ ಸಿಂಗ್ ವರ್ಷದ ಗೋಲ್‌ಕೀಪರ್ ಪ್ರಶಸ್ತಿ ಗೆದ್ದುಕೊಂಡಿದ್ದಾರೆ. ಕೌಲಾಲಂಪುರದಲ್ಲಿ ಭಾರತೀಯ ಹಾಕಿ ೧೦೦ ವರ್ಷ ಪೂರೈಸಿರುವ ಸ್ಮರಣಾರ್ಥ ಮತ್ತು ೧೯೭೫ ರಲ್ಲಿ ದೇಶದ ವಿಶ್ವಕಪ್ ವಿಜಯವನ್ನು ಆಚರಿಸಲು ಏಳನೇ ಹಾಕಿ ಇಂಡಿಯಾ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು. ಈ ವೇಳೆ ೧೯೭೫ ರ ಪುರುಷರ ವಿಶ್ವಕಪ್ ವಿಜೇತ ತಂಡಕ್ಕೆ ಹಾಕಿ ಇಂಡಿಯಾ ಮೇಜರ್ ಧ್ಯಾನ್ ಚಂದ್ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಲಾಯಿತು. ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾಜಿ ಕ್ರೀಡಾ ಸಚಿವ ಕಿರಣ್ ರಿಜಿಜು, ಹಾಕಿ ಇಂಡಿಯಾ ಅಧ್ಯಕ್ಷ ದಿಲೀಪ್ ಟಿರ್ಕಿ ಮತ್ತು ಪ್ರಧಾನ ಕಾರ್ಯದರ್ಶಿ ಭೋಲಾ ನಾಥ್ ಸಿಂಗ್ ಭಾಗವಹಿಸಿದ್ದರು.

<><*<><>*><>

೨೦೨೫ರ ಮಹಿಳಾ ಪ್ರೀಮಿಯರ್ ಲೀಗ್- ಡಬ್ಲ್ಯುಪಿಎಲ್ ಟಿ-೨೦ ಪ್ರಶಸ್ತಿಯನ್ನು ಮುಂಬೈ ಇಂಡಿಯನ್ಸ್ ತನ್ನದಾಗಿಸಿಕೊಂಡಿದೆ. ಮುಂಬೈನ ಬ್ರಬಾರ್ನ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್- ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೮ ರನ್‌ಗಳ ಜಯ ದಾಖಲಿಸಿ ಎರಡನೇ ಬಾರಿಗೆ ಡಬ್ಲ್ಯುಪಿಎಲ್ ಕಿರೀಟವನ್ನು ಮುಡಿಗೇರಿಸಿಕೊಂಡಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ತಂಡ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೪೯ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೧ ರನ್‌ಗಳಿಸಲಷ್ಟೇ ಶಕ್ತವಾಯಿತು. ಉತ್ತಮ ಬ್ಯಾಟಿಂಗ್ ಪ್ರದರ್ಶನಕ್ಕಾಗಿ ಮುಂಬೈನ ಹರ್ಮನ್‌ಪ್ರೀತ್ ಕೌರ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರೆ, ಟೂರ್ನಿಯುದ್ದಕ್ಕೂ ನೀಡಿದ ಅತ್ಯುತ್ತಮ ಪ್ರದರ್ಶನಕ್ಕಾಗಿ ಮುಂಬೈ ಇಂಡಿಯನ್ಸ್ ತಂಡದವರೇ ಆದ ನ್ಯಾಟ್ ಸ್ಕೈವರ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು.

<><*<><>*><>

ಮುಂದಿನ ವರ್ಷದ ಗಣರಾಜ್ಯೋತ್ಸವ ಸಂದರ್ಭದಲ್ಲಿ ಪ್ರಕಟಿಸಲಾಗುವ ೨೦೨೬ರ ಪದ್ಮ ಪ್ರಶಸ್ತಿಗಳಿಗಾಗಿ ನಾಮ ನಿರ್ದೇಶನ ನಿನ್ನೆಯಿಂದ ಆರಂಭವಾಗಿದೆ.  ಜುಲೈ ೩೧ ಕೊನೆಯ ದಿನವಾಗಿರುತ್ತದೆ. ನಾಮ ನಿರ್ದೇಶನಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಮಾತ್ರ ಸ್ವೀಕರಿಸಲಾಗುತ್ತದೆ. ಪ್ರದ್ಮ ಪ್ರಶಸ್ತಿಗಳಾದ, ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮ ಶ್ರೀ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾಗಿವೆ. ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವಿಜ್ಞಾನ ಮುಂತಾದ ಹಲವು ವಲಯಗಳಲ್ಲಿ ಅಸಾಧಾರಣ ಕೊಡುಗೆ ಮತ್ತು ಸಾಧನೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿ ನೀಡಲಾಗುತ್ತದೆ.

**<><*<><>*><>**

ಕಾಶ್ಮೀರದ ಬಯಲು ಪ್ರದೇಶಗಳು ಸೇರಿದಂತೆ ಹಲವು ಪ್ರದೇಶಗಳಲ್ಲಿ ನಿನ್ನೆ ಹಿಮಪಾತವಾಗಿದ್ದು, ಕಣಿವೆಯ ಇತರ ಭಾಗಗಳಲ್ಲಿ ಹಗುರದಿಂದ ಮಳೆಯಾಗಿದೆ. ಅನಂತ್‌ನಾಗ್, ಕುಲ್ಗಾಮ್, ಶೋಪಿಯಾನ್ ಮತ್ತು ಪುಲ್ವಾಮಾ ಜಿಲ್ಲೆಗಳ ಬಯಲು ಪ್ರದೇಶಗಳು ಸೇರಿದಂತೆ ಗುಲ್ಮಾರ್ಗ್, ಸೋನಾಮಾರ್ಗ್ ಮತ್ತು ಪಹಲ್ಗಾಮ್ ಪ್ರವಾಸಿ ತಾಣಗಳಲ್ಲಿಯೂ ಹಿಮಪಾತ ದಾಖಲಾಗಿದೆ. ಬಂಡಿಪೋರಾ ಜಿಲ್ಲೆಯ ಗುರೆಜ್, ಕುಪ್ವಾರಾದ ಕೆಲವು ಪ್ರದೇಶಗಳು ಮತ್ತು ಕಣಿವೆಯ ಹಲವಾರು ಪ್ರದೇಶಗಳಲ್ಲಿ ಹಿಮಪಾತವಾಗಿದೆ. ಕಾಶ್ಮೀರದ ಇತರ ಭಾಗಗಳಲ್ಲಿ ಹಗುರದಿಂದ ಮಳೆಯಾಗುತ್ತಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಗಂಟೆಗೆ <>*><>**